# ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
# KARNATAKA LEGISLATIVE ASSEMBLY RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಕರ್ನಾಟಕ ವಿಧಾನಸಭೆ

ಪತ್ರಿಕೆಯ ಹೆಸರು : NAME OF THE NEWS PAPER : ಸಂಯುಕ್ತ ಕರ್ನಾಟಕ    ದಿನಾಂಕ : DATE : 2/11/19

# ಮುಖ್ಯಮಂತ್ರಿ ಆಗಲು ನಾನು ಸಿದ್ಧ

**ಬಾಗಲಕೋಟೆ:** ಸಿಎಂ ಆಗುವ ಅವಕಾಶ ಸಿಕ್ಕರೆ ಯಾರೂ ಬೇಡ ಎನ್ನುವುದಿಲ್ಲ, ನನಗೆ ಅವಕಾಶ ದೊರೆತರೆ ಮುಖ್ಯಮಂತ್ರಿಯಾಗಲು ಸಿದ್ಧ ಎಂದು ಶಾಸಕ ಮುರುಗೇಶ ನಿರಾಣಿ ಹೇಳಿದರು.



ಜಿಲ್ಲೆಯ ಕಲ್ಲಾಪುರ ಎಸ್.ಕೆ.ಗ್ರಾಮದಲ್ಲಿ ಶುಕ್ರವಾರ ಸುದ್ದಿಗಾರರೊಂದಿಗೆ ಮಾತನಾಡಿ, ''ಸಿಎಂ, ಡಿಸಿಎಂ ಹುದ್ದೆಗಳಿಗೆ ಬೆನ್ನುಬೀಳುವ ಜಾಯಮಾನ ನನ್ನದಲ್ಲ. ಟಿಕೆಟ್ ನೀಡದಿದ್ದರೂ ಬಿಜೆಪಿ ಕಾರ್ಯಕರ್ತನಾಗಿರುತ್ತೇನೆ. ರೈತ ಕುಟುಂಬದ ನಾನು ಉದ್ಯಮದಲ್ಲಿ ಸಾಧಿಸಿದ್ದು, ಯಾವ ಹುದ್ದೆ ಕೊಟ್ಟರೂ ನಿಭಾಯಿಸುತ್ತೇನೆ,'' ಎಂದು ಉತ್ತರಿಸಿದರು.

ಸಿದ್ದರಾಮಯ್ಯ ಹೇಳಿಕೆಗೆ ಪ್ರತಿಕ್ರಿಯಿಸಿ, ''ಸರಕಾರ ಸತ್ತು ಹೋಗಿದೆ ಎಂದು ಹೇಳುತ್ತಿರುವ ಸಿದ್ದರಾಮಯ್ಯನವರೇ ಕಾಂಗ್ರೆಸ್ ಬಿಟ್ಟು ಬಂದರೆ ಆಶ್ಚರ್ಯವಿಲ್ಲ. ಸಿದ್ದರಾಮಯ್ಯ ಹಿರಿಯರು. ಅವರನ್ನು ಟೀಕಿಸುವಷ್ಟು ದೊಡ್ಡವನಲ್ಲ. ಕಾಂಗ್ರೆಸ್‌ನಲ್ಲಿ ಹಲವರು ಪಕ್ಷ ತೊರೆಯುತ್ತಿದ್ದಾರೆ. ಸಿದ್ದರಾಮಯ್ಯ ಕೂಡ ಕಾಂಗ್ರೆಸ್ ತೊರೆಯಲಿದ್ದಾರೆ. ಉಪ ಚುನಾವಣೆಯಲ್ಲಿ ಬಿಜೆಪಿ 12 ಸ್ಥಾನಗಳಲ್ಲಿ ಗೆಲುವು ಸಾಧಿಸಲಿದೆ,'' ಎಂದರು.

1